# ಕರ್ನಾಟಕ ವಿಧಾನ ಪರಿಷತ್ತು

ವಿಷಯ: ವಿಧಾನ ಪರಿಷತ್ತಿನ ಸಚಿವಾಲಯದ ಶಾಸಕರ ಭವನದ ಅಧಿಕೃತ ವಾಹನಗಳಿಗೆ ಆಯುಧ ಪೂಜೆಯ ಪ್ರಯುಕ್ತ ಹಣ ಮಂಜೂರು ಮಾಡುವ ಬಗ್ಗೆ.

******

**ಓದಲಾಗಿದೆ:**

ಕಡತ ಸಂ: ಕವಿಪ:ಶಾಭ:584:ಆಪೂ:2014, ಕಂಡಿಕೆ ಸಂ:228ರಿಂದ 232ರವರೆಗೆ.

**ಪ್ರಸ್ತಾವನೆ:**

ಓದಲಾಗಿರುವ ಕಡತದಲ್ಲಿ ವಿಧಾನ ಪರಿಷತ್ತಿನ ಸಚಿವಾಲಯದ ಶಾಸಕರ ಭವನದ ಅಧಿಕೃತ ವಾಹನಗಳಿಗೆ ಹಾಗೂ ಕಛೇರಿಗೆ ಪ್ರತಿ ವರ್ಷದಂತೆ ಆಯುಧ ಪೂಜೆ ಮಾಡಲು ನಿರ್ಧರಿಸಲಾಗಿದೆ. ಈ ಸಂಬಂಧ ಹಬ್ಬದ ಸಂದರ್ಭದಲ್ಲಿ ಹೂವು, ಹಣ್ಣು, ಮತ್ತು ಇತರೆ ಪೂಜಾ ಸಾಮಗ್ರಿಗಳ ಹಾಗೂ ಸಿಹಿ ತಿನಿಸುಗಳನ್ನು ಖರೀದಿಸಲು ಒಟ್ಟು ರೂ.1,75,000/-(ಒಂದು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಮಂಜೂರು ಮಾಡುವಂತೆ ವಾಹನ ಚಾಲಕರುಗಳು ಕೋರಿರುತ್ತಾರೆ. ಶ್ರೀ ಲಕ್ಷ್ಮಿವೆಂಕಟೇಶ್ವರ ಫ್ಲವರ್ಸ್, ನಂ-ಎಸ್:7, ಶಾಸಕರ ಭವನ, ಬೆಂಗಳೂರು. ಇವರಿಂದ ಸದರಿ ಪೂಜೆಯ ಸಾಮಾಗ್ರಿಗಳನ್ನು ಖರೀದಿಸಲು ರೂ.1,35,000/-(ಒಂದು ಲಕ್ಷದ ಮೂವತ್ತೈದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಮಂಜೂರು ಮಾಡಲು ಮಾನ್ಯ ಸಭಾಪತಿಯವರು ಅನುಮೋದಿಸಿರುತ್ತಾರೆ.

**ಆದೇಶ ಸಂಖ್ಯೆ: ಕವಿಪ:ಆ-1:39:ಆಯು:2024.**
**ಬೆಂಗಳೂರು, ದಿನಾಂಕ: 27.09.2024.**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ವಿಧಾನ ಪರಿಷತ್ತಿನ ಸಚಿವಾಲಯದ ಶಾಸಕರ ಭವನದ ಅಧಿಕೃತ ವಾಹನಗಳಿಗೆ ಹಾಗೂ ಕಛೇರಿಗೆ ಆಯುಧ ಪೂಜೆಯ ನಿಮಿತ್ತ ಪೂಜಾ ಸಾಮಗ್ರಿಗಳ ಖರ್ಚು ಹಾಗೂ ಸಿಹಿ ತಿನಿಸುಗಳ ವೆಚ್ಚಗಳಿಗಾಗಿ ರೂ.1,35,000/-(ಒಂದು ಲಕ್ಷದ ಮೂವತ್ತೈದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಶ್ರೀ ಲಕ್ಷ್ಮಿವೆಂಕಟೇಶ್ವರ ಫ್ಲವರ್ಸ್, ನಂ-ಎಸ್:7, ಶಾಸಕರ ಭವನ, ಬೆಂಗಳೂರು ಇವರಿಗೆ ಪಾವತಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಈ ಬಗ್ಗೆ ತಗಲುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ "2011-02-104-2-01-051 ಸಾಮಾನ್ಯ ವೆಚ್ಚಗಳು" ಅಡಿಯಲ್ಲಿ ಭರಿಸತಕ್ಕದ್ದು.

ಮಾನ್ಯ ಸಭಾಪತಿಯವರ ಆದೇಶಾನುಸಾರ,

(ಎಸ್.ನಿರ್ಮಲ)
ಅಪರ ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

**ಪ್ರತಿಗಳು:**

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮಾನ್ಯ ಸಭಾಪತಿಯವರ ಆಪ್ತಕಾರ್ಯದರ್ಶಿಯವರಿಗೆ, ಕವಿಪ.
3. ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರಿಗೆ, ಕವಿಪ.
4. ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರಿಗೆ, ಕವಿಪ.
5. ಉಪ ಕಾರ್ಯದರ್ಶಿ/ಅಧೀನ ಕಾರ್ಯದರ್ಶಿ/ಶಾಖಾಧಿಕಾರಿ, ಲೆಕ್ಕಪತ್ರ ಶಾಖೆ, ಕವಿಪ.
6. ಉಪ ಕಾರ್ಯದರ್ಶಿ/ಅಧೀನ ಕಾರ್ಯದರ್ಶಿ/ಶಾಖಾಧಿಕಾರಿ, ಆಡಳಿತ ಶಾಖೆ, ಕವಿಪ.
7. ಖಜಾನಾಧಿಕಾರಿ, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಮೆ: ಶ್ರೀ ಲಕ್ಷ್ಮಿವೆಂಕಟೇಶ್ವರ ಫ್ಲವರ್ಸ್, ನಂ-ಎಸ್:7, ಶಾಸಕರ ಭವನ, ಬೆಂಗಳೂರು.560001.
9. ಉಪ ಕಾರ್ಯದರ್ಶಿ/ಕ್ಷೇತ್ರಾಧಿಕಾರಿ, ಶಾಸಕರ ಭವನ, ಕವಿಪ.
10. ಸಂಬಂಧಪಟ್ಟ ಕಡತಕ್ಕೆ/ರಕ್ಷಾ ಕಡತಕ್ಕೆ/ಬಿಡಿ ಪ್ರತಿ.